ದಿನಗೂಲಿ ನೌಕರರ ಖಾಯಂ ಮಾಡುವುದು

1825 (1990); ಶ್ರೀ ಇಕ್ಬಾಲ್ ಅನ್ಸಾರಿ

ಅ) ರಾಜ್ಯದ ವಿವಿಧ ನಗರಸಭೆ / ಪುರಸಭೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ದಿನಗೂಲಿ ನೌಕರರ ಸಂಖ್ಯೆ ಎಷ್ಟು; ಈ ಪೈಕಿ ಗಂಗಾವತಿ ನಗರಸಭೆಯಲ್ಲಿ ಸೇವೆ ಸಲ್ಲಿಸುತ್ತಿರುವ ದಿನಗೂಲಿ ನೌಕರರ ಸಂಖ್ಯೆ ಎಷ್ಟು;

ಆ) ಸತತ ಹತ್ತು ವರ್ಷ ಸೇವೆ ಸಲ್ಲಿಸಿದ ದಿನಗೂಲಿ ನೌಕರರಿಗೆ ಸಮಾನ ವೇತನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಈ ದಿನಗೂಲಿ ನೌಕರರನ್ನು ಖಾಯಂ ಮಾಡಲಾಗುವುದೇ;

ಈ) ದಿನಗೂಲಿ ನೌಕರರಿಗೆ ಖಜಾನೆಯಿಂದ ವೇತನ ಪಾವತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಡಾ॥ ಖಮರುಲ್ ಇಸ್ಲಾಂ (ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

ಅ) 2854. ಇವರ ಪೈಕಿ ಗಂಗಾವತಿ ನಗರಸಭೆಯಲ್ಲಿ ಸೇವೆ ಸಲ್ಲಿಸುತ್ತಿರುವ ದಿನಗೂಲಿ ನೌಕರರ ಸಂಖ್ಯೆ – 76.

ಆ) ಇಲ್ಲ.

ಇ) ಈ ಕುರಿತಂತೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಈ) ಇಲ್ಲ.